**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003**

**ಸಂಖ್ಯೆ: ಸಿ1/SSLC/ಮಾ.ಪ್ರ.ಪ/87/2023–24** ದಿನಾಂಕ:31-01-2024

**ಸುತ್ತೋಲೆ**

ವಿಷಯ: 2023–24 ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯ ಮಾದರಿ ಪ್ರಶ್ನೆ ಪತ್ರಿಕೆಗಳನ್ನು ಮಂಡಲಿಯ ಜಾಲತಾಣದಲ್ಲಿ ಪ್ರಕಟಿಸಿರುವ ಬಗ್ಗೆ.

*****

2023–24 ನೇ ಸಾಲಿನಲ್ಲಿ ರಾಜ್ಯಪಠ್ಯಕ್ರಮ ಅನುಸರಿಸುತ್ತಿರುವ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ವತಿಯಿಂದ ಎಸ್.ಎಸ್.ಎಲ್.ಸಿ. ಪರೀಕ್ಷೆ–1, 2 ಮತ್ತು 3ನ್ನು ನಡೆಸಲಾಗುತ್ತಿದೆ. ಸದರಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ 10ನೇ ತರಗತಿಯ ಮಾದರಿ ಪ್ರಶ್ನೆ ಪತ್ರಿಕೆಗಳನ್ನು **ದಿನಾಂಕ:31–01–2024** ರಂದು ಮಂಡಲಿಯ ಜಾಲತಾಣದಲ್ಲಿ https://kseab.karnataka.gov.in ನಲ್ಲಿ ಪ್ರಕಟಿಸಲಾಗಿದೆ. ಸದರಿ ಮಾದರಿ ಪ್ರಶ್ನೆ ಪತ್ರಿಕೆಗಳನ್ನು ವಿದ್ಯಾರ್ಥಿಗಳಿಗೆ ನೀಡಿ ಅಭ್ಯಸಿಸುವಂತೆ ಕ್ರಮವಹಿಸಲು ಸೂಚಿಸಿದೆ.

31/1/2024
(ಗೋಪಾಲಕೃಷ್ಣ ಹೆಚ್.ಎನ್.)
ನಿರ್ದೇಶಕರು(ಪರೀಕ್ಷೆ)

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:–

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ ರವರಿಗೆ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
3. ಶಾಲಾ ಮುಖ್ಯಶಿಕ್ಷಕರು/ಪ್ರಾಂಶುಪಾಲರಿಗೆ(ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ)
4. ವಿದ್ಯಾರ್ಥಿ/ಪೋಷಕರಿಗೆ (ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರ ಮೂಲಕ) ಮಾಹಿತಿಗಾಗಿ.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಅಧ್ಯಕ್ಷರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ರವರು ಮಾನ್ಯ ಅಧ್ಯಕ್ಷರು ರವರ ಅವಗಾಹನೆಗೆ ತರಲು ಕೋರಿದೆ.
2. ಕಛೇರಿ ಪ್ರತಿ.